# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ :** ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ - ಹುದ್ದೆಗಳ ಹಂಚಿಕೆ ಮಾಡುವ ಬಗ್ಗೆ.

**<u>ಓದಲಾಗಿದೆ :</u>**

ಸರ್ಕಾರದ ಆದೇಶ ಸಂಖ್ಯೆ: ಆರ್ ಡಿಪಿಆರ್ 52 ಜಿಪಿಎಸ್ 2020, ದಿನಾಂಕ:07-05-2020.

**<u>ಪ್ರಸ್ತಾವನೆ:</u>**

ಮೇಲೆ ಓದಲಾದ, ದಿನಾಂಕ:07-05-2020ರ ಆದೇಶದಲ್ಲಿ, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವನ್ನು ಸ್ಥಾಪಿಸಲಾಗಿದೆ. ಸದರಿ ಆದೇಶದಲ್ಲಿ ಆಯುಕ್ತರ ಹುದ್ದೆಯನ್ನು ಸಹ ಸೃಜಿಸಲಾಗಿದೆ. ಉಳಿದಂತೆ ಪಂಚಾಯತ್ ರಾಜ್ ಆಯುಕ್ತಾಲಯದ ದೈನಂದಿನ ಚಟುವಟಿಕೆಗಳಿಗೆ ಅವಶ್ಯವಿರುವ ಹುದ್ದೆಗಳನ್ನು ಮಂಜೂರು ಮಾಡುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ದೈನಂದಿನ ಆಡಳಿತಾತ್ಮಕ ಕಾರ್ಯ ಚಟುವಟಿಕೆಗಳಿಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆ ಹಾಗೂ ಕರ್ನಾಟಕ ವಿಕಾಸಕ್ಕೆ ಮಂಜೂರಾಗಿರುವ ಹುದ್ದೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಳಾಂತರಿಸಿ ಕಚೇರಿಯ ಕಾರ್ಯಕಲಾಪಗಳನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂ: ಗ್ರಾಅಪ 469 ಗ್ರಾಪಂಅ 2020, ಬೆಂಗಳೂರು, ದಿ:04-06-2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆಯ ಹಾಗೂ ಕರ್ನಾಟಕ ವಿಕಾಸಕ್ಕೆ ಮಂಜೂರಾಗಿರುವ ಈ ಕೆಳಕಂಡ ಹುದ್ದೆಗಳನ್ನು (ಸದರಿ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿ / ನೌಕರರ ಸಮೇತ) ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಜಿಲ್ಲಾ ಪಂಚಾಯತ್ ಕಟ್ಟಡ, ಕೆ.ಜಿ.ರಸ್ತೆ, ಬೆಂಗಳೂರು ಇಲ್ಲಿಗೆ ಸ್ಥಳಾಂತರಿಸಿ ಆದೇಶಿಸಿದೆ.

**<u>ಅಭಿವೃದ್ಧಿ ಆಯುಕ್ತರ ಸಿಬ್ಬಂದಿ ಶಾಖೆ</u>**

| ಕ್ರಮ ಸಂಖ್ಯೆ | ಪದನಾಮ ಮತ್ತು ವೇತನ ಶ್ರೇಣಿ | ಹುದ್ದೆಗಳ ಸಂಖ್ಯೆ |
|---|---|---|
| 1 | ನಿರ್ದೇಶಕರು, (ಗ್ರಾಮೀಣ ಮೂಲ ಸೌಕಯ - -1) ಹಾಗೂ ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ (ರೂ.90500-123300) | 1 |
| 2 | ಸರ್ಕಾರದ ಉಪ ಕಾರ್ಯದರ್ಶಿ (ರೂ. 74400-109600) | 1 |
| 3 | ಉಪನಿರ್ದೇಶಕರು ಹಾಗೂ ಸರ್ಕಾರದ ಪದನಿಮಿತ್ತ ಅಧೀನ ಕಾರ್ಯದರ್ಶಿ (ರೂ. 52650-97100) | 2 |

| | | |
|---|---|---|
| 4 | ಗೆಜೆಟೆಡ್ ಮಾನೇಜರ್ (ರೂ. 40900-78200) | 3 |
| 5 | ಅಧೀಕ್ಷಕರು (ರೂ. 37900-70850) | 4 |
| 6 | ಪ್ರಥಮ ದರ್ಜೆ ಸಹಾಯಕರು (ರೂ. 27650-52650) | 7 |
| 7 | ಶೀಘ್ರಲಿಪಿಗಾರರು ( ರೂ. 14550-26700) | 2 |
| 8 | ದ್ವಿತೀಯ ದರ್ಜೆ ಸಹಾಯಕರು (ರೂ. 21400-42000) | 5 |
| 9 | ಬೆರಳಚ್ಚುಗಾರರು (ರೂ. 21400-42000) | 6 |
| 10 | ವಾಹನ ಚಾಲಕರು (ರೂ. 21400-42000) | 6 |
| 11 | ಅಟೆಂಡರ್ (ರೂ. 19950-37900) | 1 |
| 12 | ದಲಾಯತ್ (ರೂ. 19000-28950) | 6 |
| | ಒಟ್ಟು | 44 |

ಕ್ರಮ ಸಂಖ್ಯೆ:1 ರ ಹುದ್ದೆಯನ್ನು ಮಾತ್ರ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಮರು ಹೊಂದಾಣಿಕೆ ಮೂಲಕ ಸ್ಥಳಾಂತರಿಸಿದೆ. ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ನಿರ್ದೇಶಕರು (ಗ್ರಾಮೀಣ ಮೂಲ ಸೌಕರ್ಯ-1) ರವರನ್ನು ನಿರ್ದೇಶಕರು, ಸ್ವ-ಉದ್ಯೋಗ ಕಾರ್ಯಕ್ರಮಗಳು ಹುದ್ದೆಯ ಎದುರಿಗೆ ನೇಮಿಸಿ ಆದೇಶಿಸಿದೆ ಹಾಗೂ ಈ ಹುದ್ದೆಯನ್ನು ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಹಾಗೂ ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ ಎಂದು ಮರು ಪದನಾಮೀಕರಿಸಿದೆ.

**<u>ಕರ್ನಾಟಕ ವಿಕಾಸ</u>**

| ಕ್ರಮ ಸಂಖ್ಯೆ | ಪದನಾಮ ಮತ್ತು ವೇತನ ಶ್ರೇಣಿ | ಹುದ್ದೆಗಳ ಸಂಖ್ಯೆ |
|---|---|---|
| 1 | ಉಪನಿರ್ದೇಶಕರು (ರೂ. 52650-97100) | 1 |
| 2 | ಪತ್ರಾಂಕಿತ ವ್ಯವಸ್ಥಾಪಕರು (ರೂ. 40900-78200) | 1 |
| 3 | ಪ್ರಥಮ ದರ್ಜೆ ಸಹಾಯಕರು (ರೂ. 27650-52650) | 2 |
| 4 | ಶೀಘ್ರಲಿಪಿಗಾರರು (ರೂ.14550-26700) | 1 |
| 5 | ದ್ವಿತೀಯ ದರ್ಜೆ ಸಹಾಯಕರು (ರೂ.21400-42000) | 1 |
| 6 | ಗ್ರೂಪ್-ಡಿ (ರೂ. 17000-28950) | 2 |
| | ಒಟ್ಟು | 8 |

ಮುಂದುವರೆದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ರಾಜ್ಯ ಮಟ್ಟದ ಹುದ್ದೆಗಳಾದ ನಿರ್ದೇಶಕರು (ಪಂ.ರಾಜ್-2) ಮತ್ತು ನಿರ್ದೇಶಕರು (ಗ್ರಾಮೀಣ ಸೌಕರ್ಯ-2) ಹುದ್ದೆಗಳನ್ನು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಮರು ಹೊಂದಾಣಿಕೆಯ ಮೂಲಕ ಸ್ಥಳಾಂತರಿಸಿ ಆದೇಶಿಸಿದೆ.

ಈ ಆದೇಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಕ್ರಮವಾಗಿ ಟಿಪ್ಪಣಿ ಸಂಖ್ಯೆ: RDPR 52 GPS 2020 (ಭಾ-1) ರ ಕಂಡಿಕೆ 6 ರಲ್ಲಿ ದಿನಾಂಕ: 30-01-2020 ಮತ್ತು FD 35 Exp-6/2020 (e office) dated:06-05-2020 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಉಮಾ ಮಹದೇವನ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ,**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-560001 ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು;
2. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಅಭಿವೃದ್ಧಿ ಆಯುಕ್ತರು ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
8. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
9. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಕಲಬುರ್ಗಿ ಮತ್ತು ಬೆಳಗಾವಿ ವಿಭಾಗಗಳು.
10. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
11. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳು.
12. ವ್ಯವಸ್ಥಾಪಕ ನಿರ್ದೇಶಕರು, ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
14. ನಿರ್ದೇಶಕರು, ಎನ್.ಐ.ಸಿ, ಬೆಂಗಳೂರು.
15. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
16. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
17. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು..

18. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
19. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
20. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಎಲ್ಲಾ ಆಯುಕ್ತರು / ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಉಪ ಕಾರ್ಯದರ್ಶಿ (ಆಡಳಿತ-1/ಆಡಳಿತ-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ನಿರ್ದೇಶಕರು (ಪಂ.ರಾಜ್-1/2) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.